Azadi Ka Amrit Mahotsav

# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

("ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ)

# Visvesvaraya Technological University

(State University of Government of Karnataka Established as per the VTU Act, 1994)

"Jnana Sangama" Belagavi-590018, Karnataka, India

**Dr. B.E. Rangaswamy** Ph.D.
**Registrar**

**Phone:** (0831) 2498100
**Fax** : (0831) 2405467

Ref: VTU/ACA/BGM/A-11/2022-23/ 1801

Date: 6 JUL 2023

## ಸುತ್ತೋಲೆ

ವಿಷಯ: ೨೦೨೨-೨೩ ನೇ ಶೈಕ್ಷಣಿಕ ಸಾಲಿಗೆ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಅರ್ಜಿ ಸಲ್ಲಿಸುವ ದಿನಾಂಕವನ್ನು ೧೫-೦೭-೨೦೨೩ ವರೆಗೆ ವಿಸ್ತರಿಸಲಾಗಿದೆ.

ಉಲ್ಲೇಖ: ಹಿವಕಇ ಪತ್ರ ಸಂ. 914550 BCWD-17012/22/2022-BCWD_SCHLR-BCWD
ದಿನಾಂಕ: ೦೫-೦೭-೨೦೨೩

ಮೇಲ್ಕಂಡ ವಿಷಯ ಹಾಗೂ ಉಲ್ಲೇಖದನ್ವಯ ಈ ಮೂಲಕ ತಿಳಿಸುವುದೇನೆಂದರೆ, ೨೦೨೨-೨೩ನೇ ಶೈಕ್ಷಣಿಕ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಈ ಕೆಳಕಂಡಂತೆ ವಿಸ್ತರಿಸಲಾಗಿದೆ.

**೨೦೨೨-೨೩ ನೇ ಶೈಕ್ಷಣಿಕ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ೦೬-೦೭-೨೦೨೩ ರಿಂದ ೧೫-೦೭-೨೦೨೩ ವರೆಗೆ ವಿಸ್ತರಿಸಲಾಗಿದೆ. (ಉಲ್ಲೇಖದ ಪತ್ರದ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ).**

ಸದರಿ ಸುತ್ತೋಲೆಯ ಮಾಹಿತಿಯನ್ನು ಆಯಾ ಕಾಲೇಜುಗಳ ಪ್ರಾಂಶುಪಾಲರು ಹಾಗೂ ವಿತಾವಿಯ ಎಲ್ಲ ವಿಭಾಗಗಳ ಅಧ್ಯಕ್ಷರುಗಳು/ಪ್ರೋಗ್ರಾಮ್ ಕೋಆರ್ಡಿನೇಟರ್‌ಗಳು, ತಮ್ಮ ಕಾಲೇಜು ಮತ್ತು ಸ್ನಾತಕೋತ್ತರ ಕೇಂದ್ರಗಳಲ್ಲಿ ಅಧ್ಯಯನ ಮಾಡುತ್ತಿರುವ ಅರ್ಹ ವಿದ್ಯಾರ್ಥಿಗಳ ಗಮನಕ್ಕೆ ತರಲು ಈ ಮೂಲಕ ಸೂಚಿಸಲಾಗಿದೆ. ಮುಂದುವರೆದು, ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವಲ್ಲಿ ವಿಳಂಬವಾಗಿದ್ದಲ್ಲಿ ಅಥವಾ ವಿದ್ಯಾರ್ಥಿಗಳು ನಿಗದಿತ ಸಮಯದಲ್ಲಿ ಅರ್ಜಿ ಸಲ್ಲಿಸದಿದ್ದಲ್ಲಿ ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರು, ವಿತಾವಿ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರುಗಳು/ಪ್ರೋಗ್ರಾಮ್ ಕೋಆರ್ಡಿನೇಟರ್‌ಗಳು ನೇರ ಹೊಣೆಗಾರರಾಗುತ್ತಾರೆ ಎಂದು ಈ ಮೂಲಕ ತಿಳಿಸಲಾಗಿದೆ.

06/07/23
ಕುಲಸಚಿವರು

ಇವರಿಗೆ,

೧) ಪ್ರಾಂಶುಪಾಲರು, (ಘಟಕ/ಸ್ವಾಯತ್ತ/ಸಂಯೋಜಿತ) ಇಂಜನೀಯರಿಂಗ್ ಕಾಲೇಜುಗಳು, ವಿಭಾಗಗಳ ಅಧ್ಯಕ್ಷರುಗಳು/ಪ್ರೋಗ್ರಾಮ್ ಕೋಆರ್ಡಿನೇಟರ್‌ಗಳು, ವಿತಾವಿಯ ಎಲ್ಲ ಸ್ನಾತಕೋತ್ತರ ಕೇಂದ್ರಗಳು.

ಪ್ರತಿ ಮಾಹಿತಿಗಾಗಿ:

೧. ಮಾನ್ಯ ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ. ಅವರ ಕಾರ್ಯದರ್ಶಿಗಳ ಮುಖಾಂತರ.
೨. ಪ್ರಾದೇಶಿಕ ನಿರ್ದೇಶಕರು(ಪ್ರಭಾರಿ), ವಿತಾವಿಯ ಬೆಂಗಳೂರು, ಬೆಳಗಾವಿ, ಕಲಬುರಗಿ ಮತ್ತು ಮೈಸೂರು ಕೇಂದ್ರಗಳು.
೩. ಲೈಜನ್ ಆಫೀಸರ್, ಎಸ್.ಸಿ./ಎಸ್.ಟಿ. ಮತ್ತು ಓ.ಬಿ.ಸಿ. ಸೆಲ್, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
೪. ನಿರ್ದೇಶಕರು, ITISMU/CNC ವಿಭಾಗ, ವಿತಾವಿ, ಬೆಳಗಾವಿ.

**ಆಯುಕ್ತರ ಕಛೇರಿ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

**ನಂ.16/ಡಿ, 3ನೇ ಮಹಡಿ, ದೇವರಾಜ ಅರಸು ಭವನ,**
**ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-560052**

ಸಂ:E 914550 BCWD-17012/22/2022-BCWD_SCHLR-BCWD ದಿನಾಂಕ:05.07.2023

## ಪ್ರಕಟಣೆ

ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು 2022-23 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ **"ಶುಲ್ಕ ಮರುಪಾವತಿ" ಕಾರ್ಯಕ್ರಮಕ್ಕೆ ಮಾತ್ರ** ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 28.05.2023 ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದ್ದು. ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಲು ಪೋಷಕರು/ವಿದ್ಯಾರ್ಥಿಗಳು/ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು. ಪ್ರಯುಕ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ **"ಶುಲ್ಕ ಮರುಪಾವತಿಗೆ ಮಾತ್ರ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 06.07.2023 ರಿಂದ 15.07.2023 ರವರೆಗೆ 10 ದಿನಗಳ ಕಾಲ ವಿಸ್ತರಿಸಲಾಗಿದೆ.**

- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ :** 15.07.2023
- **ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ :** https://ssp.postmatric.karnataka.gov.in
- **ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ:** https://bcwd.karnataka.gov.in
- **ಇಲಾಖಾ ಸಹಾಯವಾಣಿ :** 8050770005
  **ಇಮೇಲ್:** bcwdhelpline@gmail.com
- **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಇಮೇಲ್ ಮತ್ತು ಸಹಾಯವಾಣಿ :** postmatrichelp@karnataka.gov.in
  080-35254757

**ಆಯುಕ್ತರು**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು.**